ಅಸಲು ದಾವಾ ಸಂಖ್ಯೆ 89/2025

ಪಿ ಡಬ್ಲ್ಯೂ: 1

**ದಿನಾಂಕ :** 02.04.2026 **ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ – ವಾದಿಗಳ ಪರವಾಗಿ ಶ್ರೀ ಪಿ ಎಸ್ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿಯಾಗಿರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿರುತ್ತದೆ ಮತ್ತು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಕೆಲವು ದಾಖಲೆಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ನಿಶಾನೀಕರಿಸಬೇಕೆಂದು ಪ್ರಾರ್ಥಿಸುತ್ತೇನೆ.

ಒಂದು ಜಿ ಪಿ ಎ ಅನ್ನು ಹಾಜರು ಪಡಿಸಿದ್ದು ಅದನ್ನು ನಿಪಿ–1 ಎಂದು, ಸರ್ವೆ ನಂಬರ್ 665ರ ಪಹಣಿ ಪತ್ರಿಕೆಯನ್ನು ನಿಪಿ–2 ಎಂದು, ಎಂ ಆರ್ ಅನ್ನು ನಿಪಿ–3 ಎಂದು, ಕಂದಾಯ ಪಾವತಿ ರಶೀದಿಯನ್ನು ನಿಪಿ–4 ಎಂದು, ದಿನಾಂಕಃ 26.09.2024ರ ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆ, ಪೊಲೀಸ್ ಉಪ ನಿರೀಕ್ಷಕರು ನೀಡಿದ ದೂರು, ಸ್ವೀಕೃತಿ, ಹಿಂಬರಹಗಳ ದೃಡೀಕೃತ ನಕಲುಗಳನ್ನು ಕ್ರಮವಾಗಿ ನಿಪಿ–5 ರಿಂದ ನಿಪಿ–8 ಎಂದು ಗುರುತಿಸಲಾಯಿತು.ದಿನಾಂಕಃ 25.11.2024ರ ಮೋಜಣಿ ಸರ್ವೇಯ ಡಿಜಿಟಲ್ ನಕಲನ್ನು ಹಾಜರ ಪಡಿಸಿದ್ದು ಅದನ್ನು ನಿಪಿ–9 ಎಂದು ಗುರುತಿಸಲಾಯಿತು. (ನಿಪಿ–9 ನ್ನು, ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 63 ರಡಿಯಲ್ಲಿ ಪ್ರಮಾಣಪತ್ರವನ್ನು ಹಾಜರು ಪಡಿಸುವ ತಕರಾರಿಗೆ ಒಳಪಟ್ಟು ಗುರುತಿಸಲಾಗಿದೆ.) ದಿನಾಂಕಃ 24.02.2025ರಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಯವರು ನೀಡಿದ ಸ್ವೀಕೃತಿಯನ್ನು ನಿಪಿ–10 ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದು ಸಮಯಾವಕಾಶ ನೀಡಿ ಮುಂದೂಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ

(ಕಾವ್ಯಶ್ರೀ. ಎಂ )
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ., ಕೊಳ್ಳೇಗಾಲ